ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

11

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 ಕರ್ನಾಟಕ ವಿಧಾನಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ  ದಿನಾಂಕ : DATE : 19/9/2020

# ಪಿರಿಯಾಪಟ್ಟಣ ಶಾಸಕ ಮಹದೇವ್‌ಗೆ ಸೋಂಕು ದೃಢ, ಅಧಿವೇಶನಕ್ಕೆ ಗೈರು



**ಪಿರಿಯಾಪಟ್ಟಣ:** ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ಶಾಸಕ ಕೆ.ಮಹದೇವ್ ಅವರಿಗೆ ಕೊರೋನಾ ಸೋಂಕು ತಗುಲಿರುವುದು ದೃಢಪಟ್ಟಿದೆ. ಸೆ.21 ರಿಂದ ವಿಧಾನಸಭೆ ಅಧಿವೇಶನ ಪ್ರಾರಂಭವಾಗುವ ಹಿನ್ನೆಲೆಯಲ್ಲಿ ಎಲ್ಲ ಶಾಸಕರು ಕೋವಿಡ್ ಟೆಸ್ಟ್ ಮಾಡಿಸಬೇಕು ಎನ್ನುವ ಸೂಚನೆ ನೀಡಲಾಗಿತ್ತು. ಆ ಕಾರಣ ಶನಿವಾರ ಪಟ್ಟಣದ ತಮ್ಮ ನಿವಾಸದಲ್ಲಿ ಟೆಸ್ಟ್ ಮಾಡಿಸಿದ್ದರು. ಯಾವುದೇ ಸೋಂಕಿನ ಲಕ್ಷಣ ಇಲ್ಲದಿದ್ದರೂ ಪಾಸಿಟಿವ್ ವರದಿ ಬಂದ ಕಾರಣ ಶಾಸಕರು ಹೋಂ ಐಸೋಲೇಷನ್‌ಗೆ ಒಳಪಟ್ಟಿದ್ದಾರೆ. ಸಂಪರ್ಕಿತರು ಪರೀಕ್ಷೆ ಮಾಡಿಸಿಕೊಳ್ಳುವಂತೆ ಕೋರಿದ್ದಾರೆ.